ಬಗರ್ ಹುಕುಂ ಸಮಿತಿ

702 (842) ಶ್ರೀ ಸುರೇಶ್ ಬಾಬು ಸಿ.ಬಿ (ಚಿಕ್ಕನಾಯನಹಳ್ಳಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ಬಗರ್ ಹುಕುಂ ಸಮಿತಿಗೆ ಅಧಿಕಾರೇತರ ಸದಸ್ಯರನ್ನು ನೇಮಕ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ;

ಆ) ಮುಂದಿದ್ದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು; ಇದುವರೆಗೆ ಈ ಸಮಿತಿ ರಚನೆಗೆ ಸಂಬಂಧಿಸಿದಂತೆ ಏನು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಮತ್ತು ಆ) ಚಿಕ್ಕನಾಯಕನಹಳ್ಳಿ ತಾಲ್ಲೂಕು ಬಗರ್‌ಹುಕುಂ ಸಮಿತಿಗೆ ಅಧಿಕಾರೇತರ ಸದಸ್ಯರನ್ನು ನೇಮಕ ಮಾಡುವ ಸಂಬಂಧ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಕೈಗಾರಿಕಾ ರಸ್ತೆ ಅಭಿವೃದ್ಧಿ

709 (550) ಶ್ರೀ ವೆಂಕಟ ಶಿವಾ ರೆಡ್ಡಿ ಜಿ.ಕೆ. (ಶ್ರೀನಿವಾಸಮರ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕರ್ನಾಟಕ ಕೈಗಾರಿಕಾ ಅಭಿವೃದ್ಧಿ ಮಂಡಳಿಯಿಂದ ಕೈಗಾರಿಕಾ ಪ್ರದೇಶಗಳ ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ; ಹಾಗಿದ್ದಲ್ಲಿ ಕೈಗೊಂಡಿರುವ ಕೈಗಾರಿಕಾ ಪ್ರದೇಶಗಳಾವುವು;

ಆ) ಪ್ರತಿ ಪ್ರದೇಶಕ್ಕೂ 2009–10ರಲ್ಲಿ ನಿಗದಿಪಡಿಸಲಾದ, ಬಿಡುಗಡೆಯಾದ ಹಾಗೂ ಖರ್ಚು ಮಾಡಿದ ಹಣವೆಷ್ಟು; (ಪೂರ್ಣ ಮಾಹಿತಿ ನೀಡುವುದು);